ಹೊಸ ದಿಗಂತ
ಹುಬ್ಬಳ್ಳಿ





ಹಳಿಯಾಳ:ಪಟ್ಟಣದ ಕೆಎಲ್ಎಸ್‌ವಿಡಿಐಟಿ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ಉಪನ್ಯಾಸ ಕಾರ್ಯಕ್ರಮದಲ್ಲಿ ಮುಂಬೈನ ನ್ಯೂಕ್ಲಿಯರ್ ಪವರ್ ಕಾರ್ಪೊರೇಷನ್ ಇಂಡಿಯಾದ ಮಾಜಿ ಕಾರ್ಯನಿರ್ವಾಹಕ ನಿರ್ದೇಶಕ ಮಹೇಂದ್ರ ಕೇಳ್ಕರ್ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗದ ಮುಖ್ಯಸ್ಥ ಡಾ.ಮಹೇಂದ್ರ ದೀಕ್ಷಿತ್ ಮತ್ತಿತರರಿದ್ದರು.

ಹೊಸ ದಿಗಂತ
13
09 Aug 2025

# ವಿದ್ಯಾರ್ಥಿಗಳು ಶಿಸ್ತು ಬೆಳೆಸಿಕೊಳ್ಳಲಿ

**ಹಳಿಯಾಳ:** ಯಶಸ್ಸು ಆಕಸ್ಮಿಕವಲ್ಲ ಅವಿರತ ಪರಿಶ್ರಮದ ಫಲ, ವಿದ್ಯಾರ್ಥಿಗಳು ಶಿಸ್ತು ಬದ್ಧ ಜೀವನವನ್ನು ರೂಪಿಸಿಕೊಂಡು, ಗುರಿಯ ಗಮ್ಯದ ಕಡೆ ಸಾಗಬೇಕೆಂದು ಹೇಳಿದರು. ಔದ್ಯೋಗಿಕ ಅವಕಾಶವನ್ನು ಗಳಿಸಿಕೊಳ್ಳಲು ಕೌಶಲ್ಯವನ್ನು ಅಭಿವೃದ್ಧಿಸಿ ಕೊಳ್ಳುವುದು ಅತ್ಯವಶ್ಯಕವಾಗಿತ್ತು, ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಪ್ರಯತ್ನಿಸಬೇಕೆಂದು ಮುಂಬೈನ ನ್ಯೂಕ್ಲಿಯರ್ ಪವರ್ ಕಾರ್ಪೊರೇಷನ್ ಇಂಡಿಯಾದ ಮಾಜಿ ಕಾರ್ಯನಿರ್ವಾಹಕ ನಿರ್ದೇಶಕ ಮಹೇಂದ್ರ ಕೇಳ್ಕರ್ ಹೇಳಿದರು. ಪಟ್ಟಣದ ಕೆಎಲ್ಎಸ್ ವಿಡಿಐಟಿ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ಉಪನ್ಯಾಸ ಕಾರ್ಯಕ್ರಮಕ್ಕೆ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದರು. ಉದ್ಯೋಗ ಕ್ಷೇತ್ರದಲ್ಲಿನ ಒತ್ತಡ ನಿರ್ವಹಣೆ, ಕಾರ್ಯ ವೈಖರಿಯ ಕುರಿತಾಗಿ ಮಾಹಿತಿ ನೀಡಿ, ತಮ್ಮ ಸುದೀರ್ಘ ಔದ್ಯೋಗಿಕ ಜೀವನದ ಅಪಾರ ಅನುಭವವನ್ನು ವಿದ್ಯಾರ್ಥಿಗಳೆದುರು ತೆರೆದಿಟ್ಟರು. ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗದ ಮುಖ್ಯಸ್ಥ ಡಾ.ಮಹೇಂದ್ರ ದೀಕ್ಷಿತ್ ಸಭಿಕರನ್ನು ಸ್ವಾಗತಿಸಿದರು. ಮಹೇಂದ್ರ ಕೇಳ್ಕರ್ ಅವರ ಪರಿಚಯ ನೀಡಿದರು. ಪ್ರೊ. ದೀಪಕ್ ಶರ್ಮ ಕಾರ್ಯಕ್ರಮ ಸಂಯೋಜಿಸಿದ್ದರು. ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗ ಮತ್ತು ಆವಿಷ್ಕಾರ ಪರಿಷತ್ತಿನ ಜಂಟಿ ಸಹಯೋಗದಲ್ಲಿ ಆಯೋಜಿಸಿದ್ಧ ಈ ಕಾರ್ಯಕ್ರಮದಲ್ಲಿ 70ಕ್ಕೂ ಅಧಿಕ ವಿದ್ಯಾರ್ಥಿಗಳು ಭಾಗವಹಿಸಿದ್ದರು. ವಿದ್ಯಾರ್ಥಿಗಳಿಗೆ ಔದ್ಯೋಗಿಕ ಜೀವನದ ಮಾರ್ಗದರ್ಶನ ನೀಡಲು ಈ ಉಪನ್ಯಾಸ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು ಎಂದು ಪ್ರಾಚಾರ್ಯ ಡಾ.ವಿ.ಎ ಕುಲಕರ್ಣಿ ತಿಳಿಸಿದ್ದಾರೆ.